**PW**–1

**ಸಾಕ್ಷಿಯನ್ನು ದಿನಾಂಕ 30.07.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ವಾದಿ ಪರ ವಕೀಲರಿಂದಃ**

ನಾನು ಈ ದಾವೆಯ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ವಿಚಾರಗಳು ಸತ್ಯವಾಗಿರುತ್ತದೆ ಮತ್ತು ಅದಕ್ಕೆ ನಾನು ನನ್ನ ಸಹಿ ಹಾಕಿರುತ್ತೇನೆ.

ದಿಃ 01.12.2021 ರ ಸ್ಥಿರ ಸ್ವತ್ತಿನ ಸ್ವಾಧೀನ ರಹಿತ ಕ್ರಯದ ಕರಾರು ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–1 ಎಂದು ಗುರುತಿಸಲಾಯಿತು. ನಿಪಿ–1 ನ್ನು ಪ್ರತಿವಾದಿ ಬರೆದುಕೊಟ್ಟಿರುತ್ತಾರೆ. ಆ ಬಗ್ಗೆ ನಿಪಿ–1 ರ ಮೇಲೆ ಅವರ ಸಹಿ ಇರುತ್ತದೆ. ಸಾಕ್ಷಿಯು ನಿಪಿ–1ರ ಮೇಲೆ ಇರುವ ಪ್ರತಿವಾದಿಯ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–1(ಎ) ಎಂದು ಗುರುತಿಸಲಾಯಿತು. ನಿಪಿ–1 ಕ್ಕೆ ಸಾಕ್ಷಿದಾರರಾಗಿ ಆನಂದ ಮತ್ತು ಮಹದೇವಸ್ವಾಮಿ ರವರು ಸಹಿ ಮಾಡಿರುತ್ತಾರೆ. ಸಾಕ್ಷಿಯು ಸದರಿಯವರ ಸಹಿಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ–1(ಬಿ) ಮತ್ತು ನಿಪಿ–1(ಸಿ) ಎಂದು ಗುರುತಿಸಲಾಯಿತು. ನಿಪಿ–1 ನ್ನು ನಾಗರಾಜು ವಕೀಲರು ತಯಾರು ಮಾಡಿರುತ್ತಾರೆ. ಸಾಕ್ಷಿಯು ಸದರಿಯವರ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–1(ಡಿ) ಎಂದು ಗುರುತಿಸಲಾಯಿತು.

ದಿಃ 07.01.2023 ರ ನೋಟೀಸ್ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–2 ಎಂದು ಗುರುತಿಸಲಾಯಿತು.

ದಿಃ 20.01.2023 ರ ಪ್ರತ್ಯುತ್ತರದ ನೋಟೀಸ್ ನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–3 ಎಂದು ಗುರುತಿಸಲಾಯಿತು.

ದಿಃ 27.04.2023 ರ ನೋಟೀಸ್ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–4 ಎಂದು ಗುರುತಿಸಲಾಯಿತು.

ಎರಡು ಅಂಚೆ ರಸೀದಿ ಮತ್ತು ಎರಡು ಅಂಚೆ ಸ್ವೀಕೃತಿ ಪತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–5 ರಿಂದ 8 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗಾಗಿ ವಕೀಲರು ಸಮಯ ಕೋರಲಾಗಿ, ಅನುಮತಿ ನೀಡಲಾಯಿತು.**

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇಳಿ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್,
ಗುಂಡ್ಲುಪೇಟೆ

This is a True Copy of the Court Records Online. Authenticated @ districts.ecourtsindia.com/cnr/KACN210005782023/truecopy/order-2.pdf